# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 169 | Pages. 2 | Date: 12-06-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 169 – ಪುಟಗಳು : 2 | 12-06-2026 ಶುಕ್ರವಾರ | Ph: 8762954248 | ದರ : ₹1


## ಪುಷ್ಪಗಿರಿ ಉಚಿತ ಸಂಚಾರಿ ಆಸ್ಪತ್ರೆ ಉದ್ಘಾಟನೆ

### ಎಂ.ಎಂ.ಎಂ. ಆಸ್ಪತ್ರೆ ಕೊಡುಗೆ | ಚುಂಚಶ್ರೀ, ಸೋಮಶೇಖರ ಶ್ರೀ ಭಾಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಮಹಾಲಕ್ಷ್ಮಿ ಮಂಜಪ್ಪ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯವರು ಹಳೇಬೀಡಿನ ಪುಷ್ಪಗಿರಿ ಮಹಾಸಂಸ್ಥಾನ ಮಠಕ್ಕೆ ಉಚಿತ ಸಂಚಾರಿ ಆಸ್ಪತ್ರೆ ಸೇವೆ ಕಲ್ಪಿಸಿದ್ದು ಗುರುವಾರ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಉದ್ಘಾಟಿಸಿದರು.



ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ಕಾಯಕ್ರಮದಲ್ಲಿ ಮಾತನಾಡಿದ ಸ್ವಾಮೀಜಿ, ಸೇವೆ ಮಾಡಲು ಶ್ರೀಮಂತಿಕೆಯೇ ಬೇಕಿಲ್ಲ. ನೆರವಾಗುವ ಕನಸು, ಇಷ್ಟಭಾವನೆ ಹಾಗೂ ಒಳ್ಳೆಯ ಉದ್ದೇಶವಿದ್ದರೆ ಭಗವಂತ ನಮಗೆ ಸಹಾಯ ಮಾಡಿಸುತ್ತಾನೆ, ಸದುದ್ದೇಶಕ್ಕೆ ದಾರಿಗಳು ಸಾಕಷ್ಟಿವೆ ಎಂದರು.

ಮಕ್ಕಳ ಭಾಷೆಯಲ್ಲಿ ಸಮಾಜ ಮಾತನಾಡುವಂತಾಗಬೇಕು. ಭಾಷೆ ಎಂದರೆ ಕನ್ನಡ, ಇಂಗ್ಲಿಷ್, ಹಿಂದಿಯಲ್ಲ.

ಭಾವನೆಗಳು ಒಂದಾಗುವ ಭಾಷೆ ಬೇರೆಯೇ ಇದ್ದು ಅದು ಒಂದಾಗಬೇಕು. ಹಾಗಾದರೆ ಸದೃಢ ಸಮಾಜ ನಿರ್ಮಾಣ ಸಾಧ್ಯವಾಗುತ್ತದೆ. ಇತರರಿಗೆ ಒಳಿತು ಮಾಡುವ ಗುರಿಯನ್ನು ನಾವು ಹಾಕಿಕೊಳ್ಳಬೇಕು. ಮಾನವ ಕಲ್ಯಾಣಕ್ಕೆ ಉಪಯೋಗವಾಗುವ ಅಭಿಪ್ಸೆ ನಮ್ಮದಾಗಿರಬೇಕು.

ಜನರ ಮೊಗದಲ್ಲಿ ಮಾಸಿರುವ ನಗುವನ್ನು ಪುನಃ ತರುವ ಉದ್ದೇಶ ಎಲ್ಲರದ್ದಾಗಿರಬೇಕು ಎಂದರು.

ಸಾನ್ನಿಧ್ಯ ವಹಿಸಿದ್ದ ಪುಷ್ಪಗಿರಿ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಮಾತನಾಡಿ, ಪುಷ್ಪಗಿರಿ ಮಠವು ಪ್ರತಿವರ್ಷ ಏನಾದರೊಂದು ಕಾರ್ಯಕ್ರಮಗಳ ಮೂಲಕ ಸಮಾಜಕ್ಕೆ ಕೊಡುಗೆ ನೀಡುತ್ತಿದೆ. ಮಹಾಲಕ್ಷ್ಮಿ ಮಂಜಪ್ಪ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆಯವರು ಸಂಚಾರಿ ವಾಹನ ಕಲ್ಪಿಸಿರುವುದು ಹೆಮ್ಮೆಯ ವಿಷಯವಾಗಿದೆ. ಜೂನ್ 15ರಿಂದ ವಾಹನ ಹಳ್ಳಿಗಳಿಗೆ ತೆರಳಲಿದ್ದು, ಆರಂಭಿಕವಾಗಿ 8 ಗ್ರಾಮ ಪಂಚಾಯಿತಿಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದರು.

ಬೇಲೂರು ಶಾಸಕ ಹೆಚ್.ಕೆ.ಸುರೇಶ್ ಮಾತನಾಡಿ, ಪುಷ್ಪಗಿರಿ ಮಠ ಆರೋಗ್ಯ, ಶಿಕ್ಷಣ ಹಾಗು ಕೃಷಿ ಕ್ಷೇತ್ರದ ಏಳಿಗೆ ಹಲವಾರು ಕಾರ್ಯಕ್ರಮ ಹಮ್ಮಿಕೊಂಡಿದೆ. ಆದಿಚುಂಚನಗಿರಿ ಮಠದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಆಗಮಿಸಿರುವುದು ಖುಷಿಯ ವಿಚಾರ. ಬೇರೆ ಬೇರೆ ಮಠಾಧಿಪತಿಗಳು ಒಟ್ಟಾಗಿ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿದರೆ ಬಡವರಿಗೆ ಅನುಕೂಲವಾಗುತ್ತದೆ ಎಂದರು.

ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಮಾತನಾಡಿದರು. ಆದಿಚುಂಚನಗಿರಿ ಶೃಂಗೇರಿ ಶಾಖಾ ಮಠದ ಶ್ರೀ ಗುಣನಾಥ ಸ್ವಾಮೀಜಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಮಹಾಲಕ್ಷ್ಮಿ ಮಂಜಪ್ಪ ಮಲ್ಟಿಸ್ಪೆಷಾಲಿಟಿ ಆಸ್ಪತ್ರೆ ಮುಖ್ಯಸ್ಥ ಡಾ. ಉಮೇಶ್, ರಚನಾ, ಮನುಕುಮಾರ್, ಕರ್ನಾಟಕ ಕಾಫಿ ಕಾರ್ಪೋರೇಷನ್ ಯೋಜನೆ ಸಂಯೋಜಕ ಯೋಗಾನಂದ ಜಾನೆಕೆರೆ, ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು, ಕಟ್ಟಾಯ ಶಿವಕುಮಾರ್, ಮಮತಾ ಪಾಟೀಲ್ ಮತ್ತಿತರರಿದ್ದರು. ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಸ್ವಾಗತಿಸಿದರು.

## ಸಾಲು ಮರದ ತಿಮ್ಮಕ್ಕ ಸ್ಮಾರಕಕ್ಕೆ ಅನುದಾನ

ಸಾಲುಮರದ ತಿಮ್ಮಕ್ಕ ಅವರು ಹಳೇಬೀಡು ಪುಷ್ಪಗಿರಿ ಮಠದಲ್ಲಿ ವಾಸ್ತವ್ಯ ಹೂಡಿದ್ದರು ಎಂಬ ವಿಚಾರವನ್ನು ಜಿಲ್ಲಾಧಿಕಾರಿಗೆ ತಿಳಿಸಿದಾಗ ಅವರ ಸ್ಮರಣಾರ್ಥ ಸ್ಮಾರಕ ನಿರ್ಮಾಣಕ್ಕೆ ಕ್ರಮ ಕೈಗೊಂಡಿದ್ದಾರೆ. 10 ಎಕರೆ ಜಾಗವನ್ನು ಅದಕ್ಕಾಗಿ ಮೀಸಲಿಟ್ಟಿದ್ದು 25 ಕೋಟಿ ರೂ. ಅನುದಾನ ಕೊಡಲು ಒಪ್ಪಿದ್ದಾರೆ. ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರೊಂದಿಗೆ ಸಹ ಚರ್ಚಿಸಿದ್ದಾರೆ. ಹಳೇಬೀಡಿನಲ್ಲಿ ಗೋಶಾಲೆ ಆರಂಭಿಸಿದ್ದು ಪಶು ಸಂಗೋಪನಾ ಇಲಾಖೆಯು ಅದನ್ನು ಮಠದ ಸಂಸ್ಥೆಗೆ ಹಸ್ತಾಂತರಿಸಬೇಕಿದೆ. ಆ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಕ್ರಮ ವಹಿಸಬೇಕೆಂದು ಶ್ರೀ ಸೋಮಶೇಖರ ಸ್ವಾಮೀಜಿ ಕೋರಿದರು.

## ಮಣ್ಣಿನ ಫಲವತ್ತತೆ ಕಾಪಾಡಲು ರೈತರಿಗೆ ಸಲಹೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಕೃಷಿಯಲ್ಲಿ ರೈತರು ಲಾಭ ಗಳಿಸುವ ದೃಷ್ಟಿಯಿಂದ ಬೆಳೆಗಳಿಗೆ ಅತಿಯಾದ ಕಿಟನಾಶಕ ಹಾಗೂ ರಸಗೊಬ್ಬರ ಬಳಕೆ ಮಾಡುತ್ತಿರುವುದರಿಂದ ಭೂಮಿಯ ಫಲವತ್ತತೆ ಹಾಳಾಗುತ್ತಿದೆ ಎಂದು ಸಾವಯವ ಕೃಷಿಕ ಗೊಲ್ಲರ ಹೊಸಳ್ಳಿ ಗಣೇಶ್ ಹೇಳಿದರು.



ತಾಲ್ಲೂಕಿನ ಗೊಲ್ಲರ ಹೊಸಹಳ್ಳಿ ಗ್ರಾಮದ ಸರ್ಕಾರಿ ಪಾಠ ಶಾಲೆಯಲ್ಲಿ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆಯಲ್ಲಿ ಮಾತನಾಡಿದರು.

ರೈತರು ಶುಂಠಿ ಸೇರಿ ಇತರೆ ವಾಣಿಜ್ಯ ಬೆಳಗಳಿಗೆ ಹೆಚ್ಚು ಕೀಟನಾಶಕ ಹಾಗೂ ರಸಗೊಬ್ಬರ ಬಳಕೆ ಮಾಡುತ್ತಿರುವ ಪರಿಣಾಮ ಮಣ್ಣಿನಲ್ಲಿರುವ ಎರೆಹುಳು ಹಾಗೂ ಸೂಕ್ಷ್ಮ ಜೀವಿಗಳು ಕಣ್ಮರೆಯಾಗುತ್ತಿವೆ. ಇದರಿಂದ ಮಣ್ಣು ತನ್ನ ಫಲವತ್ತತೆ ಕಳೆದುಕೊಂಡು ಯಾವುದೇ ಬೆಳೆ ಬೆಳೆಯಲು ಸತ್ವ ಕಳೆದುಕೊಳ್ಳುತ್ತದೆ. ಈ ಬಗ್ಗೆ ರೈತರು ಚಿಂತಿಸುವ ಅಗತ್ಯವಿದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಪರಿಸರದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ಜಾಗೃತಿ ಕಾರ್ಯಕ್ರಮ ಆಯೋಜಿಸಿ ಮಕ್ಕಳಲ್ಲಿ ಪರಿಸರ ಪ್ರೇಮ ಬೆಳೆಸಲಾಗುತ್ತಿದೆ. ಜೊತೆಗೆ ಯೋಜನೆ ವತಿಯಿಂದ ಕೆರೆಗಳ ಪುನಶ್ಚೇತನಕ್ಕಾಗಿ ಕೆರೆ ಹೂಳೆತ್ತುವ ಮೂಲಕ ಅಭಿವೃದ್ಧಿಪಡಿಸಿ ಪ್ರಾಣಿ ಪಕ್ಷಿಸಂಕುಲಕ್ಕೆ ನೀರಿನ ನೆಲೆ ಕಲ್ಪಿಸುವ ಕೆಲಸ ನಡೆಯುತ್ತಿದೆ ಎಂದರು.

ಶ್ರವಣಬೆಳಗೊಳ ಯೋಜನಾ ಕಚೇರಿ ಯೋಜನಾಧಿಕಾರಿ ಕೆ.ಪುರಂದರ ಮಾತನಾಡಿ, ಈ ಹಿಂದೆ ಶಾಲೆಗಳಲ್ಲಿ ಕೈತೋಟಗಳನ್ನು ಶಿಕ್ಷಕರು ಹಾಗೂ ಮಕ್ಕಳು ಬೆಳೆಸುತ್ತಿದ್ದರು. ಇದರಿಂದ ಅವರಿಗೆ ಶುದ್ಧವಾದ ಗಾಳಿ ಉತ್ತಮ ಪರಿಸರ ನಿರ್ಮಾಣವಾಗುತ್ತಿತ್ತು. ಆದರೆ ಇಂದಿನ ಆಧುನಿಕ ಯುಗದಲ್ಲಿ ಅವೆಲ್ಲವೂ ಮಾಯವಾಗಿ ವಿಜ್ಞಾನ ಹಾಗೂ ತಂತ್ರಜ್ಞಾನಕ್ಕೆ ಹೆಚ್ಚಿನ ಮಹತ್ವ ನೀಡಲಾಗುತ್ತದೆ. ಹೀಗೆ ಮುಂದುವರೆದರೆ ನಾವು ಮುಂಬರುವ ದಿನಗಳಲ್ಲಿ ಕಷ್ಟದ ದಿನಗಳನ್ನು ಎದುರಿಸಬೇಕಾಗುತ್ತದೆ ಎಂದರು.

ಯೋಜನೆಯ ಕೃಷಿ ಅಧಿಕಾರಿ ಲಿಂಗರಾಜು, ಮುಖ್ಯ ಶಿಕ್ಷಕ ಜೈ ಶಂಕರ್, ಸೇವಾ ಪ್ರತಿನಿಧಿ ಗೀತಾ ಮತ್ತಿತರರಿದ್ದರು.

## ವಿದ್ಯಾರ್ಥಿನಿಯರು ಆಕರ್ಷಣೆಗೆ ಬಲಿಯಾಗುವುದು ಬೇಡ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಹದಿಹರೆಯದ ವಯಸ್ಸಿನಲ್ಲಿ ಹೆಣ್ಣು ಮಕ್ಕಳು ಸಾಕಷ್ಟು ಎಚ್ಚರಿಕೆಯಿಂದ ಇರಬೇಕು ಎಂದು ಹಿರೀಸಾವೆ ಪಿಎಸ್ಐ ರೂಪಾದೇವಿ ಬಿರಾದಾರ್ ಸಲಹೆ ನೀಡಿದರು.

ತಾಲ್ಲೂಕಿನ ಹಿರೀಸಾವೆ ಪಿಎಂಶ್ರೀ ಶಾಸಕರ ಮಾದರಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳಿಗೆ ಫೋಕ್ಸ್ ಕಾಯ್ದೆ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿ, ಪಾಲಕರು ಸಹ ತಮ್ಮ ಮಕ್ಕಳತ್ತ ಹೆಚ್ಚು ಗಮನ ಹರಿಸಬೇಕು ಎಂದರು.

ಶಾಲೆ ಸೇರಿ ಯಾವುದೇ ಸ್ಥಳಗಳಲ್ಲಿ ಪರಿಚಿತ ಅಥವಾ ಅಪರಿಚಿತ ವ್ಯಕ್ತಿಗಳಿಂದ ಅಸಭ್ಯ ವರ್ತನೆ ಕಂಡು ಬಂದರೆ ತಕ್ಷಣ ಪೋಷಕರು ಅಥವಾ ಶಿಕ್ಷಕರಿಗೆ ಮಾಹಿತಿ ನೀಡಬೇಕು. ಅದರಿಂದ ಅನಾಹುತ ತಪ್ಪಿಸುವುದರ ಜೊತೆಗೆ ಅವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಬಹುದು. ಇತ್ತೀಚಿನ ದಿನಗಳಲ್ಲಿ ಪುಂಡ ಪೋಕರಿಗಳ ಹಾವಳಿ ಹೆಚ್ಚಾಗುತ್ತಿದೆ. ಹೆಣ್ಣು ಮಕ್ಕಳು ಸಾಕಷ್ಟು ಜಾಗೃತಿ ವಹಿಸಬೇಕು. ಇಲ್ಲವಾದರೆ ಬದುಕು ದುರ್ಬಲವಾಗುತ್ತದೆ. ರಸ್ತೆಯಲ್ಲಿ ಸಾಗುವ ವೇಳೆ ಅಪರಿಚಿತರಿಂದ ಅಥವಾ ಶಾಲೆಗಳಲ್ಲಿ ಸಹ ಪಾಠಿಗಳು ಇಲ್ಲವೇ ಇತರರಿಂದ ಅಸಭ್ಯ ವರ್ತನೆ ಕಂಡು ಬಂದರೆ ಶಿಕ್ಷಕರಿಗೆ ತಿಳಿಸಬೇಕು. ಇಲ್ಲವೇ, 1098 ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಶೈಕ್ಷಣಿಕ ಹಂತದಲ್ಲಿ ಓದು ಹಾಗು ಮುಂದಿನ ಸಾಧನೆಯ ಬಗ್ಗೆ ಗಮನ ಕೇಂದ್ರಿಕರಿಸಬೇಕು. ವ್ಯಾಮೋಹಕ್ಕೆ ಒಳಗಾಗಿ ದಾರಿ ತಪ್ಪಿದರೆ ಮತ್ತೊಮ್ಮೆ ಜೀವನವನ್ನು ಸರಿಪಡಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ನಮ್ಮ ಬದುಕು ರೂಪಿಸುವಲ್ಲಿ ಪರಿಶ್ರಮ ಪಡುತ್ತಿರುವ ಪಾಲಕರ ಬಗ್ಗೆ ಗೌರವ ಬೆಳೆಸಿಕೊಳ್ಳಬೇಕು. ನಮ್ಮಿಂದ ಪಾಲಕರ ಆಸೆ ಹಾಗು ನಂಬಿಕೆಗೆ ದ್ರೋಹ ಬಗೆಯಬಾರದೆಂದರು.

ಶಾಲೆಗೆ ತೆರಳುವಾಗ ಹಾಗೂ ಶಾಲೆಯಿಂದ ಮನೆಗೆ ಹಿಂದಿರುಗುವ ವೇಳೆ ರಸ್ತೆಯಲ್ಲಿ ಜಾಗೃತಿಯಿಂದ ನಡೆದು ಸಾಗಬೇಕು. ರಸ್ತೆ ದಾಟುವ ಸಮಯದಲ್ಲಿ ಎರಡು ಕಡೆ ವೀಕ್ಷಿಸಿ ಎಚ್ಚರಿಕೆಯಿಂದ ದಾಟಬೇಕು. ಇನ್ನು 18 ವರ್ಷ ತುಂಬುವವರೆಗೂ ವಾಹನ ಚಾಲನೆಗೆ ಮುಂದಾಗಬಾರದು. ನಂತರ ವಾಹನ ಪರವಾನಿಗೆ ಪಡೆದು ಸಂಚಾರ ನಿಯಮಗಳನ್ನು ಪಾಲನೆ ಮಾಡುವ ಮೂಲಕ ಚಾಲನೆ ಮಾಡುವುದು ಅಗತ್ಯ ಎಂದು ಎಚ್ಚರಿಸಿದರು.

### ಸಾಮಾಜಿಕ ಜಾಲತಾಣಗಳ ಬಗ್ಗೆ ಎಚ್ಚರವಿರಲಿ

ಟಿವಿ ವೀಕ್ಷಣೆಯಿಂದ ಮನರಂಜನೆ ಸಿಗಬಹುದು. ಹಾಗೆಯೇ ಶೈಕ್ಷಣಿಕ ವ್ಯವಸ್ಥೆಗೆ ಮೊಬೈಲ್ ಬಳಕೆ ಅಗತ್ಯ. ಅತಿಯಾದರೆ ಅಮೃತವೂ ವಿಷ ಎಂಬಂತೆ ಮೊಬೈಲ್ ಹಾಗು ಟಿವಿ ಭವಿಷ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ. ಶಿಕ್ಷಣವನ್ನು ನಂಬಿ ಮುನ್ನಡೆದರೆ ಭವಿಷ್ಯ ಉಜ್ವಲವಾಗಿರುತ್ತದೆ. ಸಾಮಾಜಿಕ ಜಾಲತಾಣಗಳಲ್ಲಿ ವೈಯಕ್ತಿಕ ಮಾಹಿತಿ ಹಾಗು ಫೋಟೊ ಹಂಚಿಕೊಳ್ಳುವುದು ಒಳ್ಳೆಯ ನಡೆಯಲ್ಲ, ಅಪರಿಚಿತರು ದುರ್ಬಳಕೆ ಮಾಡಿಕೊಂಡು ನಿಮ್ಮ ಮೇಲೆ ಆರೋಪಗಳು ಬರುವಂತೆ ಮಾಡುವ ಸಾಧ್ಯತೆ ಹೆಚ್ಚಾಗಿರುತ್ತದೆ. ಬ್ಲ್ಯಾಕ್ ಮೇಲ್ ಮಾಡಿ ನಿಮ್ಮ ಕುಟುಂಬಕ್ಕೆ ಬೆದರಿಕೆ ಹಾಕಿ ಹಣ ವಸೂಲಿ ಮಾಡುವ ಸಾಧ್ಯತೆ ಇರಲಿದೆ. ಪೊಲೀಸ್ ಠಾಣೆ, ಅಧಿಕಾರಿಗಳನ್ನು ಕಂಡರೆ ಭಯಪಡುವ ಅಗತ್ಯವಿಲ್ಲ. ಜನಸ್ನೇಹಿ ಪೊಲೀಸ್ ವ್ಯವಸ್ಥೆ ಜಾರಿಯಲ್ಲಿದೆ. ಯಾವುದೇ ಅಪಾಯ ಎದುರಾದರೆ ನಮ್ಮ ಗಮನಕ್ಕೆ ತರಬೇಕೆಂದು ಕಿವಿಮಾತು ಹೇಳಿದರು.

ಬಳಿಕ ರೂಪಾದೇವಿ ಬಿರಾದರ್ ಅವರು ಬಂದೂಕು ಬಳಕೆ ವಿಧಾನವನ್ನು ವಿದ್ಯಾರ್ಥಿಗಳಿಗೆ ವಿವರಿಸಿದರು. ಸಹ ಶಿಕ್ಷಕರಾದ ಧರ್ಮೇಶ್, ದೇವಕಿ, ಪೊಲೀಸ್ ಸಿಬ್ಬಂದಿ ರೂಪ ಧರ್ಮೇಶ್ ಹಾಗೂ ಇತರರು ಇದ್ದರು.

## ಸನಾತನ ಸೇವಾ ಟ್ರಸ್ಟ್ ಸೇವೆಗೆ ಸಾರ್ವಜನಿಕರ ಮೆಚ್ಚುಗೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಮಾಜಮುಖಿ ಸೇವಾ ಕಾರ್ಯಗಳ ಮೂಲಕ ಜನಮನ ಗೆದ್ದಿರುವ ಸನಾತನ ಸೇವಾ ಟ್ರಸ್ಟ್ ವತಿಯಿಂದ ಬೇಲೂರಿನ ಶ್ರೀ ಚನ್ನಕೇಶವ ನೇತ್ರಾಲಯದ ಸಹಯೋಗದಲ್ಲಿ ಗುರುವಾರ ಪಟ್ಟಣದ ಪುರಭವನದಲ್ಲಿ ಆಯೋಜಿಸಿದ್ದ ಉಚಿತ ನೇತ್ರ ತಪಾಸಣಾ ಶಿಬಿರಕ್ಕೆ ಸಾರ್ವಜನಿಕರಿಂದ ಅಭೂತಪೂರ್ವ ಸ್ಪಂದನೆ ವ್ಯಕ್ತವಾಯಿತು.

ಶಿಬಿರದಲ್ಲಿ 300ಕ್ಕೂ ಹೆಚ್ಚು ಮಂದಿ ಭಾಗವಹಿಸಿ ಉಚಿತ ನೇತ್ರ ತಪಾಸಣೆಯ ಸೌಲಭ್ಯ ಪಡೆದುಕೊಂಡರು. ತಪಾಸಣೆ ವೇಳೆ ದೃಷ್ಟಿದೋಷ ಕಂಡುಬಂದ 120 ಮಂದಿಗೆ ಉಚಿತವಾಗಿ ಕನ್ನಡಕಗಳನ್ನು ವಿತರಿಸಲಾಯಿತು.

ಪ್ರಗತಿಪರ ರೈತ ಧರಣೇಶ್ ಮಾತನಾಡಿ, ಕಣ್ಣು ಮಾನವನ ಅತ್ಯಂತ ಅಮೂಲ್ಯ ಹಾಗೂ ಸೂಕ್ಷ್ಮ ಅಂಗವಾಗಿದ್ದು, ಅದರ ಆರೋಗ್ಯದ ಬಗ್ಗೆ ಪ್ರತಿಯೊಬ್ಬರೂ ವಿಶೇಷ ಕಾಳಜಿ ವಹಿಸಬೇಕು ಎಂದು ಹೇಳಿದರು.

ಇಂದಿನ ಡಿಜಿಟಲ್ ಯುಗದಲ್ಲಿ ಮೊಬೈಲ್, ದೂರದರ್ಶನ ಹಾಗೂ ಇತರೆ ಎಲೆಕ್ಟ್ರಾನಿಕ್ ಸಾಧನಗಳ ಅತಿಯಾದ ಬಳಕೆಯಿಂದ ಕಣ್ಣಿನ ಸಮಸ್ಯೆಗಳು ಹೆಚ್ಚಾಗುತ್ತಿದ್ದು, ವಿಶೇಷವಾಗಿ ಮಕ್ಕಳ ಕಣ್ಣಿನ ಆರೋಗ್ಯದ ಬಗ್ಗೆ ಪೋಷಕರು ಹೆಚ್ಚಿನ ಜಾಗೃತಿ ವಹಿಸುವ ಅಗತ್ಯವಿದೆ ಎಂದು ತಿಳಿಸಿದರು.

ಸನಾತನ ಸೇವಾ ಟ್ರಸ್ಟ್ ಹಲವು ವರ್ಷಗಳಿಂದ ಧಾರ್ಮಿಕ ಹಾಗೂ ಜನೋಪಯೋಗಿ ಕಾರ್ಯಕ್ರಮಗಳ ಮೂಲಕ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದು, ಇಂತಹ ಆರೋಗ್ಯ ಶಿಬಿರಗಳು ಗ್ರಾಮೀಣ ಭಾಗದ ಜನರಿಗೆ ಹೆಚ್ಚಿನ ನೆರವಾಗುತ್ತಿವೆ. ಮುಂದಿನ ದಿನಗಳಲ್ಲಿಯೂ ಇನ್ನಷ್ಟು ಆರೋಗ್ಯ ಹಾಗೂ ಜನಪರ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಸಮಾಜದ ಅಭಿವೃದ್ಧಿಗೆ ಟ್ರಸ್ಟ್ ತನ್ನ ಕೊಡುಗೆ ಮುಂದುವರಿಸಲಿ ಎಂದು ಆಶಿಸಿದರು.

ಶಿಬಿರದಲ್ಲಿ ನೇತ್ರ ತಜ್ಞ ವೈದ್ಯರು ಸಾರ್ವಜನಿಕರ ಕಣ್ಣಿನ ತಪಾಸಣೆ ನಡೆಸಿ ಅಗತ್ಯ ಸಲಹೆ ಹಾಗೂ ಚಿಕಿತ್ಸಾ ಮಾರ್ಗದರ್ಶನ ನೀಡಿದರು. ಗ್ರಾಮೀಣ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಉಚಿತ ಆರೋಗ್ಯ ಸೇವೆಯ ಸದುಪಯೋಗ ಪಡೆದುಕೊಂಡರು. ವೈದ್ಯರ ಸೇವೆ ಹಾಗೂ ಟ್ರಸ್ಟ್‌ನ ಸಮಾಜಮುಖಿ ಕಾರ್ಯಕ್ಕೆ ಸಾರ್ವಜನಿಕರಿಂದ ವ್ಯಾಪಕ ಮೆಚ್ಚುಗೆ ವ್ಯಕ್ತವಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸನಾತನ ಸೇವಾ ಟ್ರಸ್ಟ್ ಅಧ್ಯಕ್ಷ ಕೊಲ್ಲಳ್ಳಿ ಬಾಲರಾಜ್ ವಹಿಸಿದ್ದರು.

ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್, ಬಿಜೆಪಿ ಮುಖಂಡ ಜೈ ಮಾರುತಿ ದೇವರಾಜ್, ಟ್ರಸ್ಟ್ ಸ್ಥಾಪಕ ಅಧ್ಯಕ್ಷ ಮಂಜುನಾಥ್ ಸಂಘಿ, ಕಾರ್ಯದರ್ಶಿ ಹೆಬ್ಬನಹಳ್ಳಿ ಸಂದೇಶ್, ಸಹ ಕಾರ್ಯದರ್ಶಿ ಅನಿಲ್ ಸಂಪಗೋಡು, ಉಪಾಧ್ಯಕ್ಷರಾದ ಅಗಲಹಟ್ಟಿ ಕುಮಾರಸ್ವಾಮಿ ಇತರರಿದ್ದರು.

## ರೌಡಿಶೀಟರ್ ಮಂಜೇಶ್ ಹತ್ಯೆ ಪ್ರಮುಖ ಆರೋಪಿಗೆ ಶೋಧ

ಹಾಸನ: ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣ ಮುಂಭಾಗ ಕಳೆದ ಭಾನುವಾರ ರಾತ್ರಿ ನಡೆದಿದ್ದ ಬೆಂಗಳೂರಿನ ರೌಡಿಶೀಟರ್ ಮಂಜೇಶ್ ಹತ್ಯೆ ಪ್ರಕರಣ ಸಂಬಂಧ 10 ಮಂದಿಯನ್ನು ಬಂಧಿಸಲಾಗಿದೆ.



ಬಂಧಿತರನ್ನು ವಿಕಾಸ್ ಎಂ.ಜಿ., ಕಲಬುರಗಿಯ ಸಾಯಿನಾಥ್, ಮೈಸೂರಿನ ಆಕಾಶ್, ಆದಿತ್ಯ ಆರ್., ನಂಜನಗೂಡಿನ ಜಯಂತ್, ತುಮಕೂರಿನ ಪುನೀತ್ ಕುಮಾರ್, ಮಾಗಡಿ ರಸ್ತೆಯ ರಾಕೇಶ್, ಬೆಳ್ಳೂರಿನ ಶಶಿಧರ್, ಬೆಂಗಳೂರಿನ ಭರತ್ ಮತ್ತು ಯಲ್ಲಾಲಿಂಗ ಎನ್ನಲಾಗಿದೆ.

ಬೆಚ್ಚಿ ಬೀಳಿಸುವ ಮರ್ಡರ್ ನಂತರ ಎಸ್ಪಿ ಶುಭಾನ್ವಿತಾ ಅವರು ಹಂತಕರ ಬಂಧನಕ್ಕಾಗಿ ಹಲವು ತನಿಖಾ ತಂಡಗಳನ್ನು ರಚನೆ ಮಾಡಿದ್ದರು. ತನಿಖಾ ತಂಡಗಳು ಕಾರ್ಯಾಚರಣೆ ನಡೆಸುತ್ತಿರುವಾಗಲೇ ಸಾಯಿನಾಥ್, ಶಶಿ, ಭರತ್ ಮೊದಲಾದ ಐವರು, ಮೊದಲೇ ವಿಡಿಯೋ ಮಾಡಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಯಬಿಟ್ಟು ನಂತರ ಡಿವೈಎಸ್ಪಿ ಗಂಗಾಧರಪ್ಪ ಅವರ ಮುಂದೆ ಶರಣಾಗಿದ್ದರು.

ಮಂಜೇಶ್ ಕೊಲೆಗೂ ನಮಗೂ ಯಾವುದೇ ಸಂಬಂಧ ಇಲ್ಲ. ಕೊಲೆ ಪ್ರಕರಣದಲ್ಲಿ ನಾವು ಭಾಗಿಯಾಗಿಲ್ಲ. ಅಂದು ನಾವು ಬೆಂಗಳೂರಿನಲ್ಲೇ ಇದ್ದೆವು. ನಂತರ ಕಾರವಾರ ಮೊದಲಾದ ಕಡೆಗಳಿಗೆ ಪ್ರವಾಸ ತೆರಳಿದ್ದೆವು. ಆದರೂ ಪೊಲೀಸರು ನಮ್ಮ ಮನೆಗಳಿಗೆ ಭೇಟಿ ನೀಡಿ ಪೋಷಕರನ್ನು ವಿಚಾರಣೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ. ನಮ್ಮಿಂದ ಬೇರೆಯವರಿಗೆ ತೊಂದರೆ ಆಗುವುದು ಬೇಡ ಎಂದು ನಾವೇ ಶರಣಾಗುತ್ತಿದ್ದೇವೆ ಎಂದು ಹೇಳಿಕೆ ನೀಡಿದ್ದರು.

ಇದು ಇಡೀ ಪ್ರಕರಣಕ್ಕೆ ತಿರುವು ನೀಡಿತ್ತು. ಈ ನಡುವೆ ಹತ್ಯೆಯಲ್ಲಿ ಭಾಗಿಯಾಗಿದ್ದ ಮತ್ತೆ ಐವರು ಆರೋಪಿಗಳನ್ನು ಐವರು ಶರಣಾಗುವ ಮುನ್ನವೇ ತನಿಖಾ ತಂಡ ಬಂಧಿಸಿದ್ದು, ಬಂಧಿತರ ಒಟ್ಟಾರೆ ಸಂಖ್ಯೆ ಹತ್ತಕ್ಕೆ ಏರಿದಂತಾಗಿದೆ. ಎಲ್ಲ ಆರೋಪಿಗಳನ್ನು ನಗರದ ಹಿಮ್ಸ್ ಆಸ್ಪತ್ರೆಯಲ್ಲಿ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದ ನಂತರ ನಗರದ ಬಡಾವಣೆ ಪೊಲೀಸ್ ಠಾಣೆಯಲ್ಲಿ ತೀವ್ರ ವಿಚಾರಣೆಗೆ ಒಳ ಪಡಿಸಲಾಗಿದೆ. ಆದರೆ ಪ್ರಕರಣದ ಕಿಂಗ್‌ಪಿನ್ ಹಾಗೂ ಪ್ರಮುಖ ಆರೋಪಿ ಪರಮೇಶ್ ಎಂಬಾತ ಇನ್ನೂ ಕೂಡ ತಲೆ ಮರೆಸಿಕೊಂಡಿದ್ದು, ಆತನ ಬಂಧನಕ್ಕಾಗಿ ಬಲೆ ಬೀಸಲಾಗಿದೆ.

## ಮಲೆನಾಡು ಭಾಗದ ಸರ್ಕಾರಿ ಶಾಲೆ ವಿಲೀನ ಬೇಡ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳಿಗೆ ಮಲೆನಾಡು ಭಾಗದ ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸುವ ಪ್ರಕ್ರಿಯೆಯಿಂದ ಸರ್ಕಾರ ಹಿಂದೆ ಸರಿಯಬೇಕು ಎಂದು ಶಾಸಕ ಸಿಮೆಂಟ್ ಮಂಜು ಆಗ್ರಹಿಸಿದರು.



ಪಟ್ಟಣದ ಕುಡುಗರಹಳ್ಳಿಯ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನೂತನ ರಂಗಮಂದಿರ ನಿರ್ಮಾಣಕ್ಕೆ ಭೂಮಿಪೂಜೆ ಹಾಗೂ ನೂತನ ಶೌಚಾಲಯ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಮಲೆನಾಡು ಭಾಗದ ಸಣ್ಣ ಸರ್ಕಾರಿ ಶಾಲೆಗಳನ್ನು ಕೆಪಿಎಸ್‌ಗೆ ವಿಲೀನಗೊಳಿಸಿದರೆ ವಿದ್ಯಾರ್ಥಿಗಳು ಪ್ರತಿದಿನ 4 ರಿಂದ 5 ಕಿ.ಮೀ. ದೂರ ಪ್ರಯಾಣಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗುತ್ತದೆ. ಇದು ಸಣ್ಣ ಮಕ್ಕಳ ಸುರಕ್ಷತೆಗೆ ಸವಾಲಾಗುವುದರ ಜೊತೆಗೆ ಗ್ರಾಮೀಣ ಶಿಕ್ಷಣದ ಮೇಲೂ ದುಷ್ಪರಿಣಾಮ ಬೀರುತ್ತದೆ ಎಂದು ಹೇಳಿದರು.

ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ ಸ್ಥಾಪನೆಗೆ ಸರ್ಕಾರ ಮುಂದಾಗುವುದಾದರೆ ಮೊದಲು ಸ್ಥಳೀಯ ಪರಿಸ್ಥಿತಿ, ಶಾಲೆಗಳ ಅಗತ್ಯತೆ ಹಾಗೂ ವಿದ್ಯಾರ್ಥಿಗಳ ಸಂಖ್ಯೆಯನ್ನು ಸಮಗ್ರವಾಗಿ ಪರಿಶೀಲಿಸಬೇಕು. ಜೊತೆಗೆ ಸ್ಥಳೀಯ ಜನಪ್ರತಿನಿಧಿಗಳು, ಪೋಷಕರು ಹಾಗೂ ಸಾರ್ವಜನಿಕರ ಅಭಿಪ್ರಾಯ ಪಡೆದು ಮುಂದಿನ ನಿರ್ಧಾರ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ವಿದ್ಯಾರ್ಥಿಗಳನ್ನು ಕೆಪಿಎಸ್ ಶಾಲೆಗೆ ಸೇರಿಸುವ ವಿಚಾರವನ್ನು ಪೋಷಕರ ಇಚ್ಛೆಗೆ ಬಿಡುವುದು ಸೂಕ್ತ. ಉತ್ತಮ ಗುಣಮಟ್ಟದ ಶಿಕ್ಷಣ ನೀಡುವ ಉದ್ದೇಶಕ್ಕೆ ನಾವು ವಿರೋಧಿಗಳಲ್ಲ. ಆದರೆ ಈಗಿರುವ ಸರ್ಕಾರಿ ಶಾಲೆಗಳಿಗೆ ಅಗತ್ಯ ಮೂಲಸೌಕರ್ಯಗಳನ್ನು ಒದಗಿಸಿ, ಅವುಗಳನ್ನು ಬಲಪಡಿಸಿದ ಬಳಿಕ ಕೆಪಿಎಸ್ ಶಾಲೆಗಳ ಸ್ಥಾಪನೆಗೆ ನನ್ನ ಬೆಂಬಲವಿದೆ ಎಂದು ಹೇಳಿದರು.

ಸರ್ಕಾರಿ ಶಾಲೆಗಳನ್ನು ವಿಲೀನಗೊಳಿಸಿದ ಬಳಿಕ ಅವುಗಳ ಜಮೀನು ಹಾಗೂ ಆಸ್ತಿಪಾಸ್ತಿಯನ್ನು ಸಂರಕ್ಷಿಸುವ ಜವಾಬ್ದಾರಿ ಸರ್ಕಾರದ ಮೇಲಿದೆ. ತಮ್ಮ ಕ್ಷೇತ್ರದಲ್ಲಿ ಸರ್ಕಾರಿ ಜಾಗ ರಕ್ಷಣೆಗೆ ಬದ್ಧವಾಗಿ ಕಾರ್ಯನಿರ್ವಹಿಸುವುದಾಗಿ ಶಾಸಕರು ತಿಳಿಸಿದರು.

ಎಸ್‌ಡಿಎಂಸಿ ಅಧ್ಯಕ್ಷ ಅಶ್ರಫ್ ಮಾತನಾಡಿ, ಈ ಶಾಲೆಯ ಅಭಿವೃದ್ಧಿಗೆ ಶಾಸಕರು ಈಗಾಗಲೇ ಹಲವು ಕೊಡುಗೆಗಳನ್ನು ನೀಡಿದ್ದಾರೆ. ಶಾಲೆ ಆರಂಭವಾದ 24 ವರ್ಷಗಳಲ್ಲಿ ಕೇವಲ ಎರಡು ಬಾರಿ ಭೂಮಿಪೂಜೆ ನಡೆದಿದ್ದು, ಶಿಕ್ಷಕರು ಹಾಗೂ ಎಸ್‌ಡಿಎಂಸಿ ಸದಸ್ಯರಿಗೆ ಶಾಸಕರು ನೀಡುತ್ತಿರುವ ಗೌರವ ಶ್ಲಾಘನೀಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ತಾಲ್ಲೂಕು ದೈಹಿಕ ಪರಿವೀಕ್ಷಕ ಖುಶವಂತ್, ಬಿಜೆಪಿ ಮಾಜಿ ಪುರಸಭಾ ಸದಸ್ಯ ಪ್ರದೀಪ್, ಬಿಜೆಪಿ ಮುಖಂಡ ಸುದೀಶ್, ಎಸ್‌ಡಿಎಂಸಿ ಅಧ್ಯಕ್ಷ ಅಶ್ರಫ್, ಗ್ರಾಮಸ್ಥರಾದ ವೆಂಕಟೇಶ್, ಸುಲೇಮಾನ್ ಇತರರಿದ್ದರು.

# ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆ ಗುರಿ ಹೆಚ್ಚಳ

## ಜಿಲ್ಲೆಯ 2 ಗ್ರಾಮಗಳ ನೀರು ಸೇವನೆಗೆ ಯೋಗ್ಯವಲ್ಲ | ಪರೀಕ್ಷಾ ವರದಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಜಿಲ್ಲಾದ್ಯಂತ ಕುಡಿಯುವ ನೀರಿನ ಗುಣಮಟ್ಟ ಪರೀಕ್ಷೆ ನಡೆಯುತ್ತಿದ್ದು ಚನ್ನರಾಯಪಟ್ಟಣ ತಾಲ್ಲೂಕಿನ ಎರಡು ಗ್ರಾಮಗಳ ನೀರು ಸೇವನೆಗೆ ಯೋಗ್ಯವಲ್ಲವೆಂಬ ವರದಿ ಬಂದಿದೆ.

ಜಂಬೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹುಲಿಕೆರೆ ಹಾಗೂ ಕಾರೆಕೆರೆ ಗ್ರಾಮದಲ್ಲಿ ಬೋರವೆಲ್ ನೀರು ಕುಡಿಯಲು ಅನರ್ಹವೆಂದು ವರದಿ ಬಹಿರಂಗಪಡಿಸಿದೆ. ಈ ಹಿನ್ನೆಲೆಯಲ್ಲಿ ಗ್ರಾಮಸ್ಥರಿಗೆ ಕುಡಿಯುವ ನೀರಿಗೆ ಪರ್ಯಾಯ ವ್ಯವಸ್ಥೆ ಮಾಡಬೇಕೆಂದು ಅಧಿಕಾರಿಗಳು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹಾಗೂ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿಗೆ ನಿರ್ದೇಶನ ನೀಡಿದ್ದಾರೆ.

ಸ್ವಚ್ಛ ಹಾಗು ಸಿಹಿಯಾಗಿರುವ ನೀರು ಶುದ್ಧವೆಂದು ಕುಡಿಯುವುದು ವಾಡಿಕೆ. ಆದರೆ ಆ ನೀರು ಕುಡಿಯಲು ಯೋಗ್ಯವೇ ಎಂಬುದನ್ನು ಪರೀಕ್ಷಿಸುವುದು ಅಷ್ಟೇ ಮುಖ್ಯವಾಗಿದೆ. ಆ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಗೆ ನೀರಿನ ಪರೀಕ್ಷೆಗೆ ಕಟ್ಟುನಿಟ್ಟಿನ ಆದೇಶ ನೀಡಿದೆ. ಈ ದಿಶೆಯಲ್ಲಿ ಪರಿಪೂರ್ಣತೆಗಾಗಿ ಪರೀಕ್ಷಾ ಗುರಿಯನ್ನು ಹೆಚ್ಚಿಸಲಾಗಿದೆ. 2025ನೇ ಸಾಲಿನಲ್ಲಿ ಜಿಲ್ಲೆಗೆ 22 ಸಾವಿರ ಪರೀಕ್ಷೆಗಳ ಗುರಿ ನೀಡಲಾಗಿತ್ತು. ಆದರೆ ಈ ವರ್ಷ 1.15 ಲಕ್ಷ ಪರೀಕ್ಷಾ ಗುರಿ ನೀಡಲಾಗಿದೆ. ಕಳೆದ ಏಪ್ರಿಲ್‌ನಿಂದ ಈ ವರೆಗೆ 19,960 ಪರೀಕ್ಷೆಗಳು ನಡೆದಿದ್ದು ಅದರಲ್ಲಿ ಜಂಬೂರು ಗ್ರಾಮ ಪಂಚಾಯಿತಿ



ವ್ಯಾಪ್ತಿಯ ಎರಡು ಗ್ರಾಮಗಳಲ್ಲಿನ ನೀರು ಕುಡಿಯಲು ಯೋಗ್ಯವಲ್ಲ ಎಂಬುದು ದೃಢಪಟ್ಟಿದೆ.

### ಪರೀಕ್ಷೆ ಹೇಗೆ ನಡೆಯುತ್ತೆ

ರಾಜ್ಯ ಸರ್ಕಾರದಿಂದಲೇ ಪರೀಕ್ಷಾ ಕಿಟ್‌ಗಳನ್ನು ನೀಡಲಾಗುತ್ತಿದ್ದು, ಖಾಸಗಿ ಕಂಪನಿಗಳು ಜವಾಬ್ದಾರಿ ವಹಿಸಿಕೊಂಡಿರುತ್ತವೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ 10 ಸದಸ್ಯರನ್ನು ಈ ಕಾರ್ಯಕ್ಕಾಗಿ ನಿಯೋಜಿಸಿದ್ದು, ಅದರಲ್ಲಿ 5 ಪುರುಷರು ಮತ್ತು 5 ಮಹಿಳೆಯರು ಇರುತ್ತಾರೆ. ಪ್ರತಿ ತಿಂಗಳಿಗೆ ಒಂದು ಗ್ರಾಮದಲ್ಲಿ 4 ಬಾರಿ ಪರೀಕ್ಷೆ ನಡೆಸುವುದು ಕಡ್ಡಾಯವಾಗಿದೆ. ಗ್ರಾಮದ ಸರ್ಕಾರಿ ಶಾಲೆ, ಅಂಗನವಾಡಿ ಹಾಗು ಪಂಚಾಯಿತಿ ಮೂಲಕ ಮನೆ ಮನೆಗೆ ಪೂರೈಕೆಯಾಗುವ ನೀರನ್ನು ತಪಾಸಣೆಗೆ ಒಳಪಡಿಸುವುದು ಕಡ್ಡಾಯ. ಸರ್ಕಾರ ಕೊಡುವ ಪರೀಕ್ಷಾ ಕಿಟ್‌ನ ವರದಿ ಅಪೂರ್ಣ ಅಥವಾ ಸಂಶಯಕ್ಕೆ ಎಡೆಮಾಡಿಕೊಡುತ್ತಿದ್ದರೆ ಅದನ್ನು ಜಿಲ್ಲಾ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗುತ್ತದೆ. ಅರಸೀಕೆರೆಯಲ್ಲಿ ಮತ್ತೊಂದು ಪ್ರಯೋಗಾಲಯವಿದ್ದು ಅದರ ನೆರವನ್ನು ಅಧಿಕಾರಿಗಳು ಪಡೆಯುತ್ತಾರೆ.

ಪರೀಕ್ಷೆಯ ವರದಿಯನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಇಲಾಖಾ ವೆಬ್‌ಸೈಟ್‌ಗೆ ಅಪ್ಲೋಡ್ ಮಾಡಬೇಕು. ಅದರ ಮೇಲ್ವಿಚಾರಣೆಯನ್ನು ಜಿಲ್ಲಾ ಕೇಂದ್ರದ ಅಧಿಕಾರಿ ಮಾಡುತ್ತಾರೆ. ಸರ್ಕಾರದ ನಿರ್ದೇಶನದಂತೆ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಪರೀಕ್ಷೆ ನಡೆಸಲಾಗುತ್ತಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

> ಗ್ರಾಮೀಣ ಭಾಗದಲ್ಲಿ ಕುಡಿಯುವ ನೀರಿನ ಪರೀಕ್ಷಾ ಗುರಿಯನ್ನು 22 ಸಾವಿರದಿಂದ 1.15 ಲಕ್ಷಕ್ಕೆ ಹೆಚ್ಚಿಸಲಾಗಿದೆ. ನಿಯೋಜಿತ ಸಿಬ್ಬಂದಿ ಹಾಗೂ ಗ್ರಾ.ಪಂ. ಮಟ್ಟದ ಸದಸ್ಯರಿಗೆ ತರಬೇತಿ ನೀಡಲಾಗಿದೆ. ಜಿಲ್ಲೆಯ ಎರಡು ಗ್ರಾಮಗಳಲ್ಲಿ ನೀರು ಸೇವನೆಗೆ ಯೋಗ್ಯವಲ್ಲ ಎಂಬುದು ದೃಢಪಟ್ಟಿದೆ.
>
> -ಹೆಚ್.ಆರ್.ನವ್ಯಶ್ರೀ,
> ಕಾರ್ಯಪಾಲಕ ಎಂಜಿನಿಯರ್ ಗ್ರಾಮೀಣ ಕುಡಿಯುವ ನೀರು ನೈರ್ಮಲ್ಯ ಇಲಾಖೆ

### ಅಶುದ್ಧ ನೀರು ಅನಾರೋಗ್ಯಕ್ಕೆ ಕಾರಣ

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಇಷ್ಟೆಲ್ಲಾ ಪರೀಕ್ಷೆಗಳು ನಡೆಯುತ್ತಿದ್ದರೂ ಗ್ರಾಮಾಂತರ ಪ್ರದೇಶಗಳಲ್ಲಿ ಇನ್ನೂ ಶುದ್ಧ ಕುಡಿಯುವ ನೀರಿನ ಬಗ್ಗೆ ಅರಿವು ಮೂಡಿಲ್ಲ. ದಶಕಗಳಿಂದ ಕೆರೆ ಅಥವಾ ಬೋರವೆಲ್ ನೀರನ್ನೇ ಸೇವಿಸುತ್ತಿದ್ದೇವೆ. ಯಾವ ಖಾಯಿಲೆಯೂ ಅಂಟಿಕೊಂಡಿಲ್ಲ. ಈ ಪರೀಕ್ಷೆಗಳೆಲ್ಲಾ ಏಕೆ ಎಂಬ ಪ್ರಶ್ನೆಗಳು ಅಧಿಕಾರಿಗಳಿಗೆ ಎದುರಾಗುತ್ತಿವೆ ಎನ್ನಲಾಗಿದೆ.

## ಇಂದು ಬಾಲಕಾರ್ಮಿಕ ಪದ್ಧತಿ ವಿರೋಧ ದಿನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ, ಜಿಲ್ಲಾ ವಕೀಲರ ಸಂಘ ಹಾಗೂ ವಿವಿಧ ಸಂಘ ಸಂಸ್ಥೆಯ ಸಹಯೋಗದಲ್ಲಿ ಜೂ.12ರ ಬೆಳಿಗ್ಗೆ 10 ಗಂಟೆಗೆ ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ವಿಶ್ವ ಬಾಲ ಕಾರ್ಮಿಕ ಪದ್ಧತಿ ವಿರೋಧ ದಿನಾಚಣೆ ಆಯೋಜಿಸಲಾಗಿದೆ.

ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರಾದ ಹೇಮಾವತಿ ಉದ್ಘಾಟಿಸಲಿದ್ದಾರೆ. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧ್ಯಕ್ಷತೆ ವಹಿಸಲಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶುಭಂ ಶುಕ್ಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತ, ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಮಹಾನಗರ ಪಾಲಿಕೆ ಆಯುಕ್ತ ಆರ್. ಕೃಷ್ಣಮೂರ್ತಿ, ವಕೀಲರ ಸಂಘ ಅಧ್ಯಕ್ಷ ಕಾರ್ಲೆ ಮೊಗಣ್ಣಗೌಡ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಎಂ.ಆರ್. ಧರಣಿಕುಮಾರ್, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪರ್ದೇಶಕ ಕೆ.ಪಿ ಗಂಗಾಧರ್, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಲರಾಮ ಕೆ.ಎನ್. ಬಲರಾಮ್ ಮತ್ತಿತರರು ಪಾಲ್ಗೊಳ್ಳುವರು. ಕಾರ್ಯಕ್ರಮ ಅಂಗವಾಗಿ ಬೆಳಿಗ್ಗೆ 8.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಾಥಾಗೆ ಚಾಲನೆ ನೀಡಲಾಗುವುದು.

## ನಾಳೆ ಪದವಿ ಪ್ರದಾನ ಸಮಾರಂಭ

ಹಾಸನ: ಹಾಸನ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಸಹಯೋಗದಲ್ಲಿ ಜೂ. 13ರ ಶನಿವಾರ ಹಿಮ್ಸ್ ಕಾಲೇಜಿನ ಸಭಾಂಗಣದಲ್ಲಿ ಪದವಿ ಪ್ರದಾನ ಕಾರ್ಯಕ್ರಮ ಆಯೋಜಿಸಲಾಗಿದೆ.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಬಿ.ಸಿ.ಭಗವಾನ್ ಭಾಗವಹಿಸಲಿದ್ದಾರೆ. ಐ.ಎನ್.ಎಸ್.ಎ ನೈಸರ್ಗಿಕ ವಿಜ್ಞಾನ ಮತ್ತು ಎಂಜಿನಿಯರಿಂಗ್ ಶಾಲೆಯ ಸಹಾಯಕ ಪ್ರಾಧ್ಯಾಪಕ ಪ್ರೊ. ಎಂ.ಕೆ. ಸೂರಪ್ಪ, ಹಿಮ್ಸ್ ನಿರ್ದೇಶಕ ಡಾ. ರಾಜಣ್ಣ ಅಧ್ಯಕ್ಷತೆ ವಹಿಸಲಿದ್ದಾರೆ.

## ವಾಹನ ನಿಲುಗಡೆ ಸ್ಥಳ ಗುರುತಿಸಲು ಸೂಚನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದಲ್ಲಿ ವಾಹನ ನಿಲುಗಡೆ ಸ್ಥಳ ಗುರುತಿಸಲು ಪೊಲೀಸ್, ಪ್ರಾದೇಶಿಕ ಸಾರಿಗೆ ಅಧಿಕಾರಿ, ಮಹಾನಗರ ಪಾಲಿಕೆ ಅಧಿಕಾರಿ, ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳು, ತಹಸಿಲ್ದಾರ್ ಸೇರಿದಂತೆ ಸಮಿತಿಯನ್ನು ರಚಿಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿಂದು ಜಿಲ್ಲಾ ರಸ್ತೆ ಸುರಕ್ಷತೆ ಪ್ರಾಧಿಕಾರದ ಸಭೆ ನಡೆಸಿ ಮಾತನಾಡಿದ ಅವರು, ನಗರ ಪ್ರಮುಖ ರಸ್ತೆಗಳಲ್ಲಿ ಹಾಗೂ ವೃತ್ತಗಳಲ್ಲಿ ಮದ್ಯದಲ್ಲಿ ಅಳವಡಿಸಿರುವ ಬ್ಯಾನರ್ ಕಡ್ಡಾಯವಾಗಿ ತೆರವುಗೊಳಿಸಲು ಅಧಿಕಾರಿಗಳಿಗೆ ತಿಳಿಸಿದರು.

ರಸ್ತೆ ಸುರಕ್ಷತೆಯ ಕುರಿತು ಪೋಸ್ಟರ್‌ಗಳನ್ನು ಶಾಲೆಗಳಲ್ಲಿ ಅಳವಡಿಸುವಂತೆ ಹಾಗೂ ಮಳೆಗಾಲ ಆರಂಭವಾಗುತ್ತಿದ್ದು ನಗರದ ಎಲ್ಲೆಡೆ ಚರಂಡಿಗಳನ್ನು ಸ್ವಚ್ಛಗೊಳಿಸುವಂತೆ ಸೂಚಿಸಿದರು.

ಸೂಚನಾ ನಾಮಫಲಕಗಳನ್ನು ಅಳವಡಿಸುವಂತೆ ಹಾಗೂ ವೇಗ ನಿಯಂತ್ರಣ ನಾಮಫಲಕ ಅಳವಡಿಸಬೇಕು. ರಾತ್ರಿ ವೇಳೆಯಲ್ಲಿ ಖಾಸಗಿ ಬಸ್‌ಗಳು ನಗರದಲ್ಲಿ ಸಂಚರಿಸದಂತೆ ಕ್ರಮ ಜರುಗಿಸಬೇಕು. ಕೆಎಸ್ ಆರ್‌ಟಿಸಿ ಬಸ್‌ಗಳು ಸೂಕ್ತ ಮಾರ್ಗವನ್ನು ಗುರುತಿಸಿ ಕಡ್ಡಾಯವಾಗಿ ಅದೇ ಮಾರ್ಗದಲ್ಲಿ ಚಲಿಸುವಂತೆ ಚಾಲಕರುಗಳಿಗೆ ನಿರ್ದೇಶನ ನೀಡಬೇಕು ಎಂದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಾರುತಿ ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಕಾಶ್ ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಮಹಾನಗರ ಪಾಲಿಕೆಯಲ್ಲಿ ನಿಧಾನಗತಿ ಕೆಲಸ: ತೊಂದರೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಾನಗರ ಪಾಲಿಕೆಯಲ್ಲಿ ಜನನ-ಮರಣ ಪ್ರಮಾಣ ಪತ್ರ ವಿತರಣೆಗೆ ಭಾರೀ ವಿಳಂಬವಾಗುತ್ತಿರುವ ಪರಿಣಾಮ ಸಾರ್ವಜನಿಕರು ವಾರಗಟ್ಟಲೇ ಕಾಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಒಂದು ತಿಂಗಳ ಹಿಂದೆ ಅರ್ಜಿ ಸಲ್ಲಿಸಿ ಈಗ ಕೇಳಿದರೂ ಇನ್ನು ಬಂದಿಲ್ಲ ಎನ್ನುತ್ತಾರೆ. ತಿದ್ದುಪಡಿ ಗಳಿದ್ದರೆ ಸರಿಪಡಿಸಿಕೊಳ್ಳುವುದಿಲ್ಲ. ವಿಳಂಬಕ್ಕೆ ಕಾರಣ ಕೇಳಿದರೆ ಸಿಬ್ಬಂದಿ ಇಲ್ಲ, ವಿದ್ಯುತ್ ಕಡಿತದ ಸಬೂಬು ಹೇಳುತ್ತಾರೆ. ದುಡ್ಡು ಕೊಟ್ಟವರಿಗೆ ಎರಡೇ ನಿಮಿಷದಲ್ಲಿ ಪ್ರಮಾಣ ಪತ್ರ ಕೊಡುತ್ತಾರೆ. ಹೀಗಾದರೆ ಬಡವರ ಪರಿಸ್ಥಿತಿ ಏನಾಗಬೇಕೆಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದರು.

ಪ್ರಮಾಣ ಪತ್ರ ಅರ್ಜಿ ಸ್ವೀಕಾರ, ಸೀಲ್ ಹಾಕಲು, ತಿದ್ದುಪಡಿ, ಶುಲ್ಕ ಪಾವತಿ ಎಲ್ಲದಕ್ಕೂ ಒಂದೇ ಕಡೆ ಕೌಂಟರ್ ಮಾಡಿರುವುದರಿಂದ ಸಮಸ್ಯೆಯಾಗುತ್ತಿದೆ. ಹೆಚ್ಚುವರಿ ಸಿಬ್ಬಂದಿ ನಿಯೋಜಿಸಿದರೆ ತ್ವರಿತಗತಿಯಲ್ಲಿ ಅರ್ಜಿ ವಿಲೇವಾರಿ ಮಾಡಬಹುದು ಎಂದರು.

ಹಾಸನ ನಗರಸಭೆ ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೇರಿದ ಬಳಿಕ ಅರ್ಜಿಗಳ ಸಂಖ್ಯೆ ಹೆಚ್ಚಾಗಿದೆ. ನಿತ್ಯ ಕನಿಷ್ಟ 10 ಮರಣ ಹಾಗು 100ಕ್ಕೂ ಹೆಚ್ಚು ಜನನ ಪ್ರಮಾಣ ಪತ್ರಕ್ಕೆ ಅರ್ಜಿ ಸಲ್ಲಿಕೆಯಾಗುತ್ತಿವೆ. ಈ ವಿಭಾಗದಲ್ಲಿ ಖಾಯಂ ಸಿಬ್ಬಂದಿ ಒಬ್ಬನೇ ಇದ್ದೇನೆ. ಜನದಟ್ಟಣೆ ಹೆಚ್ಚಾದ ಹಿನ್ನಲೆ ನಾಲ್ಕು ದಿನಗಳ ಹಿಂದೆ ಹೊರಗುತ್ತಿಗೆಯಲ್ಲಿ ಕೆಲಸ ಮಾಡುತ್ತಿರುವ ಇಬ್ಬರು ಸಿಬ್ಬಂದಿ ನಿಯೋಜಿಸಲಾಗಿದೆ. ನಾನು ಶಕ್ತಿಮೀರಿ ಕೆಲಸ ಮಾಡುತ್ತಿದ್ದೇನೆಂದು ನೌಕರ ಕುಮಾರ್ ಅಸಹಾಯಕತೆ ವ್ಯಕ್ತಪಡಿಸಿದರು.

ಲಾಗಿನ್ ಒಂದೇ ಇರುವುದರಿಂದ ಪ್ರತ್ಯೇಕ ಕೌಂಟರ್ ತೆರೆಯಲು ಸಾಧ್ಯವಿಲ್ಲ. ಹೊಸ ಅರ್ಜಿಗಿಂತ ತಿದ್ದುಪಡಿಗಾಗಿ ಬರುವವರ ಸಂಖ್ಯೆ ಹೆಚ್ಚಿದೆ. ಜನರು ತಾಳ್ಮೆಯಿಂದ ಇದ್ದರೆ ಕೆಲಸ ಮಾಡಿಕೊಡಬಹುದೆಂದರು.

ಕೌಂಟರ್‌ನಲ್ಲಿ ಗಲಾಟೆ ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಪೌರಾಯುಕ್ತ ಆರ್.ಕೃಷ್ಣಮೂರ್ತಿ ಅವರು ಸರದಿ ಸಾಲಿನಲ್ಲಿ ನಿಲ್ಲುವಂತೆ ಸೂಚಿಸಿ ತ್ವರಿತಗತಿಯಲ್ಲಿ ಅರ್ಜಿ ವಿಲೇವಾರಿಗೆ ಸೂಚಿಸಿದರು.

ಜೂನ್-ಜುಲೈನಲ್ಲಿ ಶಾಲಾ ದಾಖಲಾತಿ ಇರುವುದರಿಂದ ಮಕ್ಕಳ ಜನನ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸುವವರ ಸಂಖ್ಯೆ ಹೆಚ್ಚಿರುತ್ತದೆ. ಸಿಬ್ಬಂದಿ ಕೊರತೆಯೂ ಹೆಚ್ಚಿದೆ. ಆದಷ್ಟು ಬೇಗ ಅರ್ಜಿ ವಿಲೇವಾರಿಗೆ ಕ್ರಮ ವಹಿಸಲಾಗುವುದು. ಜನರು ಸಹ ತಾಳ್ಮೆಯಿಂದ ವರ್ತಿಸಬೇಕು ಎಂದು ಮನವಿ ಮಾಡಿದರು.

## ಜೂ. 14ರಂದು ಎರಡು ಕೃತಿ ಲೋಕಾರ್ಪಣೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ಬರಹಗಾರ ದಿಬ್ಬೂರು ರಮೇಶ್ ಅವರ ಎರಡು ಕೃತಿಗಳ ಬಿಡುಗಡೆ ಹಾಗೂ ಜಿಲ್ಲಾ ಮಟ್ಟದ ಕವಿಗೋಷ್ಠಿ ತಾಲೂಕು ಬರಹಗಾರರ ಸಂಘ, ಕರ್ನಾಟಕ ಜಾನಪದ ಪರಿಷತ್ ಹಾಗೂ ಅಹಲ್ಯಾಬಾಯಿ ಹೋಳ್ಕರ್ ಮಹಿಳಾ ಸಹಕಾರ ಸಂಘದ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದೆ ಎಂದು ಬರಹಗಾರರ ಸಂಘದ ಅಧ್ಯಕ್ಷ ಡಾ.ಬಸವರಾಜು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ. 14ರ ಭಾನುವಾರ ಬೆಳಗ್ಗೆ 10 ಗಂಟೆಗೆ ನಗರದ ರೋಟರಿ ಭವನದಲ್ಲಿ ಕಾರ್ಯಕ್ರಮ ಆಯೋಜಿಸಿದ್ದು ಜಾನಪದ, ಸುಗಮ ಸಂಗೀತ, ರಂಗಗೀತೆ, ವಚನ ಗಾಯನ, ಲಘು ಸಂಗೀತ, ಭಜನೆ ಮತ್ತು ತತ್ವಪದ ಗೀತೆಗಳ ಗಾಯಕರಾಗಿರುವ ದಿಬ್ಬೂರು ರಮೇಶ್ ಅವರು 700ಕ್ಕೂ ಹೆಚ್ಚು ವೇದಿಕೆ ಕಾರ್ಯಕ್ರಮಗಳನ್ನು ರಾಜ್ಯವ್ಯಾಪಿ ನಡೆಸಿಕೊಟ್ಟಿದ್ದಾರೆ. ರಾಜ್ಯ ಮತ್ತು ರಾಷ್ಟ್ರಮಟ್ಟದ ಅನೇಕ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಾಹಿತ್ಯಾಸಕ್ತರ ಮೆಚ್ಚುಗೆಗೆ ಪಾತ್ರವಾಗಿರುವುದಲ್ಲದೆ ಹಲವು ಪ್ರಶಸ್ತಿ ಪುರಸ್ಕಾರಗಳಿಗೆ ಭಾಜನರಾಗುವ ಮೂಲಕ ತಾಲೂಕಿಗೆ ಕೀರ್ತಿ ತಂದಿದ್ದಾರೆ. ರಮೇಶ ಅವರು ಪ್ರಸ್ತುತ ಎರಡು ಕೃತಿಗಳನ್ನು ಬರೆದಿದ್ದು ಆ ಕೃತಿಗಳನ್ನು ಲೋಕಾರ್ಪಣೆ ಮಾಡುವ ಸುಸಂದರ್ಭ ಒದಗಿ ಬಂದಿರುವುದು ಸಂತಸದ ವಿಷಯವಾಗಿದೆ ಎಂದು ಹೇಳಿದರು.

ನಗರದಲ್ಲಿ ನಡೆಯುತ್ತಿರುವ ಈ ವಿಶೇಷ ಕಾರ್ಯಕ್ರಮದಲ್ಲಿ ನಾಡಿನ ಖ್ಯಾತ ಸಾಹಿತಿಗಳು ವಾಗ್ಮಿಗಳು ಪಾಲ್ಗೊಳ್ಳುತ್ತಿದ್ದು ತಾಲೂಕಿನ ಸಾಹಿತ್ಯ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಮೂಲಕ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿಕೊಡುವಂತೆ ಮನವಿ ಮಾಡಿದರು.

ಕೃತಿ ಲೋಕಾರ್ಪಣೆ ಕವಿಗೋಷ್ಠಿ ಗಷ್ಟೇ ಕಾರ್ಯಕ್ರಮವನ್ನು ಸೀಮಿತಗೊಳಿಸದೆ ಯುವ ಸಮುದಾಯದಲ್ಲಿ ಸಾಹಿತ್ಯ ಆಸಕ್ತಿ ಬೆಳೆಸುವ ನಿಟ್ಟಿನಲ್ಲಿ ಬರಹಗಾರರ ಸಂಘ ಮುಂದಿನ ದಿನಗಳಲ್ಲಿ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಿದೆ ಎಂದು ಇದೇ ಸಂದರ್ಭದಲ್ಲಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಬರಹಗಾರರ ಸಂಘದ ಅಧ್ಯಕ್ಷ ಸುಂದರೇಶ್ ಉಡುವಾರೆ, ಹಿರಿಯ ಸಾಹಿತಿ ಚೆನ್ನೆಗೌಡ, ನಿವೃತ್ತ ಶಿಕ್ಷಕ ಕೆ.ಸಿ. ನಟರಾಜ್, ಬರಹಗಾರರ ಸಂಘದ ಕಾರ್ಯದರ್ಶಿ ಡಾ. ಹರೀಶ್, ಕೃತಿಕಾರ ದಿಬ್ಬೂರು ರಮೇಶ್ ಇತರರಿದ್ದರು.

## ಇತಿಹಾಸದಲ್ಲಿ ಈ ದಿನ

### ಜೂನ್-12

1776: ಅಮೆರಿಕದ ವರ್ಜೀನಿಯಾ ರಾಜ್ಯದಲ್ಲಿ ವರ್ಜೀನಿಯಾ ಹಕ್ಕುಗಳ ಘೋಷಣೆ ಅಂಗೀಕರಿಸಲಾಯಿತು. ಇದು ನಂತರದ ಅನೇಕ ಪ್ರಜಾಪ್ರಭುತ್ವ ಸಂವಿಧಾನಗಳಿಗೆ ಪ್ರೇರಣೆಯಾಯಿತು.

1898: ಫಿಲಿಪ್ಪೀನ್ಸ್ ದೇಶವು ಸ್ಪೇನ್ ಆಳ್ವಿಕೆಯಿಂದ ಸ್ವಾತಂತ್ರ್ಯ ಘೋಷಿಸಿತು. ಈ ದಿನವನ್ನು ಫಿಲಿಪ್ಪೀನ್ಸ್‌ನಲ್ಲಿ ಸ್ವಾತಂತ್ರ್ಯ ದಿನವನ್ನಾಗಿ ಆಚರಿಸಲಾಗುತ್ತದೆ.

1964: ನೆಲ್ಸನ್ ಮಂಡೇಲಾ ಅವರಿಗೆ ದಕ್ಷಿಣ ಆಫ್ರಿಕಾದ ವರ್ಣಭೇದ ವಿರೋಧಿ ಹೋರಾಟದ ಹಿನ್ನೆಲೆಯಲ್ಲಿ ಜೀವಾವಧಿ ಶಿಕ್ಷೆ ವಿಧಿಸಲಾಯಿತು.

1967: ಅಮೆರಿಕದ ಸುಪ್ರೀಂ ಕೋರ್ಟ್ ಔಟಡಜ್ಞಿಜ ಡ. ಷ್ಟಿಜಜ್ಞಿಜಿಚ ಪ್ರಕರಣದಲ್ಲಿ ಅಂತರ್ಜಾತಿ ವಿವಾಹದ ಮೇಲಿನ ನಿರ್ಬಂಧಗಳನ್ನು ಅಸಂವಿಧಾನಿಕ ಎಂದು ಘೋಷಿಸಿತು.

1987: ರೊನಾಲ್ಡ್ ರೇಗನ್ ಅವರು ಬರ್ಲಿನ್ ಗೋಡೆಯ ಬಳಿ ನೀಡಿದ ಐತಿಹಾಸಿಕ ಭಾಷಣದಲ್ಲಿ **“Mr. Gorbachev, tear down this wall”** ಎಂದು ಕರೆ ನೀಡಿದರು.

1991: ಬೋರಿಸ್ ಯೆಲ್ಸಿನ್ ರಷ್ಯಾದ ಮೊದಲ ಜನರಿಂದ ನೇರವಾಗಿ ಆಯ್ಕೆಯಾದ ಅಧ್ಯಕ್ಷರಾದರು.

#### ಜನನ

1929: ಆನ್ ಫ್ರಾಂಕ್, ಅವರ ದಿನಚರಿ ವಿಶ್ವದ ಅತ್ಯಂತ ಪ್ರಸಿದ್ಧ ಕೃತಿಗಳಲ್ಲಿ ಒಂದಾಗಿದೆ.

#### ನಿಧನ

1963: ಮೆಡ್ಗರ್ ಎವರ್ಸ್ ಹತ್ಯೆ

## ಸಾವಿರ ಜನರಿಂದ ಹನುಮಾನ್ ಚಾಲೀಸಾ ಪಠಣ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ರೈಲ್ವೆ ನಿಲ್ದಾಣ ಎದುರಿನ ಶ್ರೀ ಆಂಜನೇಯ ಸ್ವಾಮಿ ದೇವಾಲಯದಲ್ಲಿ 1 ಸಾವಿರ ಭಕ್ತರಿಂದ ಜೂ.13 ರಂದು ಸಾಮೂಹಿಕ ಹನುಮಾನ್ ಚಾಲೀಸಾ ಪಠಣ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ದೇವಾಲಯದ ಪ್ರಧಾನ ಅರ್ಚಕ ರಕ್ಷಿತ್ ಭಾರದ್ವಾಜ್ ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಗುರುವಾರ ಮಾತನಾಡಿದ ಅವರು, ಶನಿವಾರ ಸಂಜೆ 5.30ಕ್ಕೆ ಧಾರ್ಮಿಕ ಕಾರ್ಯಕ್ರಮ ನಡೆಯಲಿದೆ. ಸಮಾಜದಲ್ಲಿ ಸಂಸ್ಕಾರ, ಸಾಂಸ್ಕೃತಿಕ ಮೌಲ್ಯಗಳ ಅರಿವು ಮೂಡಿಸುವ ಉದ್ದೇಶದಿಂದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಆಧ್ಯಾತ್ಮಿಕ ಚಿಂತಕ ಜಗನ್ನಾಥ ಶಾಸ್ತ್ರಿ ಪ್ರವಚನ ನೀಡಲಿದ್ದಾರೆ. ಸುಂದರಕಾಂಡ ಪಾರಾಯಣ, ರಾಮತಾರಕ ಹೋಮ ಹಾಗೂ ಪೂರ್ಣಾಹುತಿ ಬಳಿಕ ಹನುಮಾನ್ ಚಾಲೀಸಾ ಪಠಣ ಜರುಗಲಿದೆ. ಭಕ್ತರಿಗೆ ಉಚಿತ ಪ್ರವೇಶವಿದ್ದು ಯಾರು ಬೇಕಾದರೂ ಭಾಗವಹಿಸಬಹುದು. ಮಂತ್ರ ಗೊತ್ತಿಲ್ಲದವರು ಪಾಲ್ಗೊಳ್ಳಬಹುದು. ದೇವಸ್ಥಾನದಲ್ಲಿ ಪ್ರವೇಶ ಚೀಟಿಗಳನ್ನು ನೀಡುತ್ತಿದ್ದು ಶುಕ್ರವಾರ ಸಂಜೆ ವರೆಗೆ ಪಡೆಯಬಹುದು. ಈಗಾಗಲೇ 800ಕ್ಕೂ ಹೆಚ್ಚು ಜನರು ನೋಂದಣಿ ಮಾಡಿಕೊಂಡಿದ್ದಾರೆ. ಮಾಹಿತಿಗೆ ಮೊ.ಸಂ. 8088677813 ಇಲ್ಲಿಗೆ ಸಂಪರ್ಕಿಸಬಹುದು ಎಂದರು.

ಸುದ್ದಿಗೋಷ್ಟಿಯಲ್ಲಿ ಚಂದ್ರಶೇಖರ್, ದೀಪಕ್, ಸರ್ವ ಮಂಗಳ ಇದ್ದರು.


## ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಜಿಪಂ ಸಿಇಒ ದಿಢೀರ್ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ಕಾರಿ ಆಸ್ಪತ್ರೆಗಳಲ್ಲಿ ಸಕಾಲದಲ್ಲಿ ಚುಚ್ಚು ಮದ್ದು ಹಾಗೂ ಔಷಧಿ ಲಭ್ಯವಿರುವಂತೆ ನೋಡಿಕೊಳ್ಳುವಂತೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಶುಭಂ ಶುಕ್ಲಾ ಸೂಚಿಸಿದರು.

ಅರಸೀಕೆರೆ ತಾಲ್ಲೋಕಿನ ಉಂಡಿಗನಾಳು, ಬಂದೂರು ಹಾಗೂ ಜಾವಗಲ್ ಗ್ರಾಮ ಪಂಚಾಯಿತಿಗೆ ಬುಧವಾರ ಭೇಟಿ ನೀಡಿ ವಿವಿಧ ಯೋಜನೆಗಳಡಿ ಅನುಷ್ಠಾನ ಮಾಡಲಾಗಿರುವ ಕಾಮಗಾರಿಗಳನ್ನು ಪರಿಶೀಲಿಸಿ ಮಾತನಾಡಿದರು.

ಉಂಡಿಗನಾಳು ಗ್ರಾಮ ಪಂಚಾಯಿತಿಯ ಪ್ರಾಥಮಿಕ ಚಿಕಿತ್ಸಾ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿಯ ವ್ಯವಸ್ಥೆಗಳ ಬಗ್ಗೆ ವೈದ್ಯರಿಂದ ಮಾಹಿತಿ ಪಡೆದರು. ಆಸ್ಪತ್ರೆಗೆ ಭೇಟಿ ನೀಡಿದ್ದ ರೋಗಿಗಳು ಹಾಗೂ ಸಾರ್ವಜನಿಕರ ಕುಂದು ಕೊರತೆಗಳನ್ನು




ಆಲಿಸಿದರು.

ಅಂಗನವಾಡಿಯಲ್ಲಿ ಅಳವಡಿಸಿರುವ ನಲ್ಲಿಯಲ್ಲಿ ನೀರು ಬರದಿರುವುದನ್ನು ಗಮನಿಸಿ ಕೂಡಲೇ ಸರಿಪಡಿಸಿ ವರದಿ ಮಾಡುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಜಲ ಜೀವನ್ ಮಿಷನ್ ಯೋಜನೆಯಡಿ ಪೈಪ್ ಲೈನ್ ಅನ್ನು ಚರಂಡಿಯಲ್ಲಿಯೇ ಅಳವಡಿಸಿರುವುದನ್ನು ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಸರಿಪಡಿಸುವಂತೆ ಸೂಚಿಸಿದರು.

5054 ಯೋಜನೆಯಡಿ ಅನುಷ್ಠಾನ ಮಾಡಲಾಗಿರುವ ಸಿಸಿ ರಸ್ತೆಗಳ ಅಳತೆ ಪ್ರಮಾಣಗಳನ್ನು ಪರಿಶೀಲಿಸಿ ನ್ಯೂನ್ಯತೆಗಳನ್ನು ಸರಿಪಡಿಸುವಂತೆ ಸೂಚಿಸಿದರು. ಬಂದೂರು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಸೇರಿದ ಲಿಂಗ್ಲಾಪುರ ಗ್ರಾಮಕ್ಕೆ ಹೋಗುವ ಡಾಂಬರು ರಸ್ತೆಯನ್ನು ಪರಿಶೀಲಿಸಿದರು. ಜಾವಗಲ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆಪಿಎಸ್ ಶಾಲೆಗೆ ಭೇಟಿ ನೀಡಿ ಶಾಲೆಯ ಸ್ವಚ್ಚತೆಯನ್ನು ಕಾಪಾಡುವಂತೆ ಹಾಗೂ ನೀರು ಪೋಲಾಗದಂತೆ ನಲ್ಲಿಗಳನ್ನು ಅಳವಡಿಸುವಂತೆ ಶಾಲಾ ಶಿಕ್ಷಕರಿಗೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಶಾಲಾ ಆವರಣದಲ್ಲಿ ನರೇಗಾ ಯೋಜನೆಯಡಿ ನಿರ್ಮಾಣವಾಗಿರುವ ಶಾಲಾ ಶೌಚಾಲಯ ಹಾಗೂ ಶಾಲಾ ಅಡುಗೆ ಕೋಣೆ ಕಾಮಗಾರಿಗಳನ್ನು ಪರಿಶೀಲಿಸಿ ನ್ಯೂನ್ಯತೆಗಳನ್ನು ಸರಿಪಡಿಸುವಂತೆ ಅಧಿಕಾರಿಗಳಿಗೆ ಹಾಗೂ ಸಿಬ್ಬಂದಿಗೆ ಸೂಚಿಸಿದರು. ಶಾಲಾ ಮಕ್ಕಳೊಂದಿಗೆ ಸಮಾಲೋಚಿಸಿ ಕುಂದು ಕೊರತೆ ಆಲಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248